# ಕುವೆಂಪು ವಿಶ್ವವಿದ್ಯಾಲಯ

ಕುಲಸಚಿವ(ಪರೀಕ್ಷಾಂಗ)ರವರ ಕಛೇರಿ. ಜ್ಞಾನಸಹ್ಯಾದ್ರಿ, ಶಂಕರಘಟ್ಟ-577451, ಶಿವಮೊಗ್ಗ, ಕರ್ನಾಟಕ.
ಫೋನ್ ನಂ.: 08282-256166, ಇ-ಮೇಲ್: regexamku@gmail.com, Mob: 7022254997 ವೆಬ್‌ಸೈಟ್: www.kuvempu.ac.in

**Re-Accredited by NAAC with 'A' Grade, Ranked 73rd Place in NIRF- 2019 and Secured 45th Place in SCIMAGO Institutional Rankings**

**ಸಂಖ್ಯೆ:ಕುವಿ:ಪವಿ:ಯುಜಿ-2: 3542 :2024-25** **ದಿನಾಂಕ: 22-10-2024**

## ಪ್ರಕಟಣೆ

**ವಿಷಯ:** ದ್ವಿಗುಣ ಅವಧಿ ಪೂರ್ಣಗೊಳಿಸಿದ (**Double the Duration**) ಸೆಮಿಸ್ಟರ್ ವಿದ್ಯಾರ್ಥಿಗಳಿಗೆ **ನವೆಂಬರ್-2024**ರಲ್ಲಿ ನಡೆಯುವ ಪದವಿ ಪರೀಕ್ಷೆ ತೆಗೆದುಕೊಳ್ಳಲು ಅಂತಿಮ ಅವಕಾಶ ನೀಡಿರುವ ಬಗ್ಗೆ.

**ಉಲ್ಲೇಖ:** 1. ದಿನಾಂಕ:16-02-2024ರ ಸಿಂಡಿಕೇಟ್ ಸಾಮಾನ್ಯ ಸಭೆಯ ನಿರ್ಣಯ.
2. ದಿನಾಂಕ:01-10-2024ರ ವಿದ್ಯಾವಿಷಯಕ ಪರಿಷತ್ತಿನ ಸಾಮಾನ್ಯ ಸಭೆಯ ನಡಾವಳಿಗಳ ಉದ್ಧೃತ ಭಾಗ.
3. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 19-10-2024.

*****

ಕುವೆಂಪು ವಿಶ್ವವಿದ್ಯಾಲಯ ವ್ಯಾಪ್ತಿಯ ಸಂಯೋಜಿತ ಕಾಲೇಜುಗಳಲ್ಲಿ ಸ್ನಾತಕ ಪದವಿಗಳಿಗೆ 2003-04ರಲ್ಲಿ ಹಾಗೂ ಅನಂತರ ಪ್ರವೇಶ ಪಡೆದ ಸೆಮಿಸ್ಟರ್ ಸ್ಕೀಂನಲ್ಲಿ ಅಧ್ಯಯನ ಮಾಡಿ. ಕೋರ್ಸ್ ಪೂರ್ಣಗೊಳಿಸಲು ನಿಗದಿಪಡಿಸಲಾಗಿದ್ದ ಅವಧಿ (**Double the Duration**) ಮುಗಿದರೂ ಸಹ ಈವರೆವಿಗೂ ಪದವಿ ಪೂರ್ಣಗೊಳಿಸಲಾಗದೆ ಕೆಲವು ವಿಷಯಗಳಲ್ಲಿ ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳಿಗೆ **ದಿನಾಂಕ:25-11-2024ರಿಂದ** (ಆಯಾ ವರ್ಷದಲ್ಲಿ ಚಾಲ್ತಿಯಲ್ಲಿರುವ ಪಠ್ಯಕ್ರಮ ಅನ್ವಯವಾಗುವಂತೆ) ವಿಶೇಷ ಸಂದರ್ಭವೆಂದು ಪರಿಗಣಿಸಿ ಪರೀಕ್ಷಾ ಶುಲ್ಕದೊಂದಿಗೆ, **ರೂ.3000/- ಹೆಚ್ಚುವರಿ ವಿಶೇಷ ಶುಲ್ಕ** ದೊಂದಿಗೆ ಅಂತಿಮ ಅವಕಾಶ ನೀಡಲಾಗಿದೆ.

**ಶಿವಮೊಗ್ಗ ಮತ್ತು ಚಿಕ್ಕಮಗಳೂರು** ಜಿಲ್ಲೆಯ ಎಲ್ಲಾ ಕಾಲೇಜಿನ ಸೆಮಿಸ್ಟರ್ ವಿದ್ಯಾರ್ಥಿಗಳು ಪರೀಕ್ಷೆಗಳನ್ನು ಆಯಾ ಕಾಲೇಜಿನಲ್ಲಿ ಬರೆಯಬೇಕು.

**ಚಿತ್ರದುರ್ಗ ಮತ್ತು ದಾವಣಗೆರೆ** ಜಿಲ್ಲೆಯ ಎಲ್ಲಾ ಕಾಲೇಜಿನ ಸೆಮಿಸ್ಟರ್ ವಿದ್ಯಾರ್ಥಿಗಳು **ಶಿವಮೊಗ್ಗದ ಸಹ್ಯಾದ್ರಿ ಕಲಾ ಕಾಲೇಜನ್ನು** ಪರೀಕ್ಷಾ ಕೇಂದ್ರವನ್ನಾಗಿಸಿಕೊಂಡು ಪರೀಕ್ಷೆಗಳನ್ನು ತೆಗೆದುಕೊಳ್ಳಲು ಅವಕಾಶ ನೀಡಲಾಗಿದೆ.

ಕುಲಸಚಿವ(ಪರೀಕ್ಷಾಂಗ)

ಕುಲಸಚಿವ (ಪರೀಕ್ಷಾಂಗ)
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನ ಸಹ್ಯಾದ್ರಿ
ಶಂಕರಘಟ್ಟ-577451, ಶಿವಮೊಗ್ಗ ಜಿಲ್ಲೆ

ಗೆ,
ಕುವೆಂಪು ವಿಶ್ವವಿದ್ಯಾಲಯದ ವ್ಯಾಪ್ತಿಯ ಶಿವಮೊಗ್ಗ / ಚಿಕ್ಕಮಗಳೂರು / ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲೆಯ ವ್ಯಾಪ್ತಿಗೊಳಪಡುವ ಎಲ್ಲಾ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

**ಪ್ರತಿಗಳು:-**

1. ಆಪ್ತಶಾಖೆ, ಮಾನ್ಯಕುಲಪತಿ, ಕುಲಸಚಿವ(ಆಡಳಿತ), ಕುಲಸಚಿವ (ಪರೀಕ್ಷಾಂಗ) ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
2. ನಿರ್ದೇಶಕರು, ಪಿ.ಎಂ.ಇ ಮಂಡಳಿ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
3. ಉಪಕುಲಸಚಿವರು: ಸಹಾಯಕ ಕುಲಸಚಿವರು, ಪರೀಕ್ಷಾಂಗ ವಿಭಾಗ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
4. ಶಾಖಾಧಿಕಾರಿಗಳು, ಪರೀಕ್ಷಾ ವಿಭಾಗ ಹಾಗೂ ಕಂಪ್ಯೂಟರ್ ವಿಭಾಗ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
5. ಗ್ರಂಥಪಾಲಕರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
6. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
7. ಸ್ನಾತಕ ಎಲ್ಲಾ ವಿಷಯ ನಿರ್ವಾಹಕರು, ಪರೀಕ್ಷಾ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
8. ಕಛೇರಿ ಪ್ರತಿ.

ಕುವೆಂಪು ವಿಶ್ವವಿದ್ಯಾಲಯ
ಕುಲಸಚಿವ(ಪರೀಕ್ಷಾಂಗ)ರವರ ಕಛೇರಿ. ಜ್ಞಾನಸಹ್ಯಾದ್ರಿ, ಶಂಕರಘಟ್ಟ–577451, ಶಿವಮೊಗ್ಗ, ಕರ್ನಾಟಕ.
ಫೋನ್ ನಂ.: 08282–256166, ಇ-ಮೇಲ್: regexamku@gmail.com, Mob: 7022254997 ವೆಬ್‌ಸೈಟ್: www.kuvempu.ac.in

Re-Accredited by NAAC with 'A' Grade, Ranked 73rd Place in NIRF– 2019 and Secured 45th Place in SCIMAGO Institutional Rankings

ಸಂಖ್ಯೆ:ಕುವಿ:ಪವಿ:ಯುಜಿ-2:3543:2024–25 ದಿನಾಂಕ: 22–10–2024

# ಅಧಿಸೂಚನೆ

ವಿಷಯ : ನವೆಂಬರ್–2024ರಲ್ಲಿ ನಡೆಯುವ NON-NEP ಹಾಗೂ ದ್ವಿಗುಣ ಅವಧಿ ಮುಗಿದಿರುವ (DOUBLE THE DURATION) ಸ್ನಾತಕ ಪದವಿ ಪರೀಕ್ಷೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಹಾಗೂ ಶುಲ್ಕ ಪಾವತಿಸುವ ಕುರಿತು.

ಉಲ್ಲೇಖ: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 19–10–2024.

*****

ಸ್ನಾತಕ ಪದವಿಗಳ ಲಿಖಿತ/ಪ್ರಾಯೋಗಿಕ ಪರೀಕ್ಷೆಗಳು ಈ ಕೆಳಕಂಡ ಮಾಹೆಯಲ್ಲಿ ಪ್ರಾರಂಭವಾಗುತ್ತವೆ.

| ಪ್ರಾಯೋಗಿಕ/ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವ ದಿನಾಂಕಗಳ ವಿವರ. |
|---|
| 1.ಲಿಖಿತ ಪರೀಕ್ಷೆಗಳು ದಿನಾಂಕ:25–11–2024ರಿಂದ ಪ್ರಾರಂಭವಾಗುವುದು |
| 2.ಪ್ರಾಯೋಗಿಕ ಪರೀಕ್ಷೆಗಳು–ರೆಗ್ಯುಲರ್/ರಿಪೀಟರ್ ವಿದ್ಯಾರ್ಥಿಗಳಿಗೆ– ಲಿಖಿತ ಪರೀಕ್ಷೆಗಳಿಗಿಂತ ಮುಂಚಿತವಾಗಿ |

ಪರೀಕ್ಷೆ ತೆಗೆದುಕೊಳ್ಳಲು ನಿಯಮಾನುಸಾರ ಅರ್ಹರಾದ 1 ರಿಂದ 6ನೇ ಸೆಮಿಸ್ಟರ್‌ನ ರಿಪೀಟರ್ಸ್ ಹಾಗೂ ದ್ವಿಗುಣ ಅವಧಿ ಮುಗಿದಿರುವ (DOUBLE THE DURATION) ವಿದ್ಯಾರ್ಥಿಗಳು ಆನ್‌ಲೈನ್‌ನಲ್ಲಿ ತಮ್ಮ ಅರ್ಜಿ / ಪರೀಕ್ಷಾ ಶುಲ್ಕವನ್ನು (ದ್ವಿಗುಣ ಅವಧಿ ಪೂರ್ಣಗೊಳಿಸಿದ ಸೆಮಿಸ್ಟರ್ ವಿದ್ಯಾರ್ಥಿಗಳು ನಿಗದಿತ ಶುಲ್ಕದೊಂದಿಗೆ ರೂ.3000/– ಗಳ ಹೆಚ್ಚುವರಿ ವಿಶೇಷ ಶುಲ್ಕ ಪಾವತಿಸುವುದು) ಪಾವತಿಸಿ ನಂತರ ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರ ಮೂಲಕ ಕುಲಸಚಿವ (ಪರೀಕ್ಷಾಂಗ) ಇವರಿಗೆ ಸಲ್ಲಿಸಲು ತಿಳಿಸಲಾಗಿದೆ.

ಕಡ್ಡಾಯವಾಗಿ ಆನ್‌ಲೈನ್‌ನಲ್ಲಿಯೇ ಅರ್ಜಿ ಸಲ್ಲಿಸುವುದು ಹಾಗೂ ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ 8183098136, 8183098138 ಸಂಪರ್ಕಿಸುವುದು. (ಕೊನೆಯ ದಿನಾಂಕದವರೆಗೆ ಅರ್ಜಿ ಸಲ್ಲಿಸಲು ಕಾಯದೇ ಮುಂಚಿತವಾಗಿಯೇ ಆನ್‌ಲೈನ್‌ನಲ್ಲಿ ಸಲ್ಲಿಸುವುದರಿಂದ ಅಂತ್ಯದಲ್ಲಿ ಉಂಟಾಗುವ ಸರ್ವರ್ ತಾಂತ್ರಿಕ ದೋಷವನ್ನು ತಪ್ಪಿಸಬಹುದಾಗಿದೆ.)

| ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ದಿನಾಂಕಗಳು: | | |
|---|---|---|
| 1 | ಶುಲ್ಕ ಪಾವತಿಗೆ ಕಡೆ ದಿನಾಂಕ | 23–10–2024 ರಿಂದ 08–11–2024 ರವರೆಗೆ |
| 2 | ವಿಳಂಬ ಶುಲ್ಕ ರೂ. 100=00ರಂತೆ (ಪ್ರತಿ ಸೆಮ್) | 09–11–2024 ರಿಂದ 10–11–2024 ರವರೆಗೆ |
| 3 | ವಿಳಂಬ ಶುಲ್ಕ ರೂ. 500=00ರಂತೆ (ಪ್ರತಿ ಸೆಮ್) | 11–11–2024 ರಿಂದ 12–11–2024 ರವರೆಗೆ |
| 4 | ನಿಗದಿತ ದಿನಾಂಕದೊಳಗೆ ಪರೀಕ್ಷಾ ಶುಲ್ಕ ಪಾವತಿಸದಂತಹ ವಿದ್ಯಾರ್ಥಿಗಳು ರೂ.1000/– (ಪ್ರತಿ ಸೆಮ್‌ಗೆ) ವಿಳಂಬ ಶುಲ್ಕದೊಂದಿಗೆ ಆನ್‌ಲೈನ್‌ನಲ್ಲಿಯೇ ಶುಲ್ಕ ಪಾವತಿಸುವುದು. | |

| | B.A/B.Sc/B.Com | | BTA / BBA / B.C.A / B.S.W | |
|---|---|---|---|---|
| 1 | ಸೆಮಿಸ್ಟರ್ ಪೂರ್ಣ ಪರೀಕ್ಷೆಗೆ | ರೂ. 685/– | ಸೆಮಿಸ್ಟರ್ ಪೂರ್ಣ ಪರೀಕ್ಷೆಗೆ | ರೂ. 1170/– |
| 2 | ಪ್ರತಿ ಪತ್ರಿಕೆಗೆ ಥಿಯರಿ ಪರೀಕ್ಷೆ ಪ್ರತ್ಯೇಕವಾಗಿ (ಪ್ರತಿ ಸೆಮಿಸ್ಟರ್ ಎಲ್ಲಾ ಪತ್ರಿಕೆಗಳಿಗೆ ರೂ. 685/–ಕ್ಕೆ ಒಳಪಟ್ಟು) | ರೂ. 220/– | ಪ್ರತಿ ಪತ್ರಿಕೆಗೆ ಥಿಯರಿ ಪರೀಕ್ಷೆ ಪ್ರತ್ಯೇಕವಾಗಿ (ಪ್ರತಿ ಸೆಮಿಸ್ಟರ್ ಎಲ್ಲಾ ಪತ್ರಿಕೆಗಳಿಗೆ ರೂ. 1170/–ಕ್ಕೆ ಒಳಪಟ್ಟು) | ರೂ. 265/– |
| 3 | ಪ್ರಾಯೋಗಿಕ ಪರೀಕ್ಷೆಗೆ ಪ್ರತಿ ಪತ್ರಿಕೆಗೆ | ರೂ. 145/– | ಪ್ರಾಯೋಗಿಕ ಪರೀಕ್ಷೆಗೆ ಪ್ರತಿ ಪತ್ರಿಕೆಗೆ | ರೂ. 145/– |
| 4 | ಅಂಕಪಟ್ಟಿ ಶುಲ್ಕ (ಪ್ರತಿ ಸೆಮಿಸ್ಟರ್‌ಗೆ) | ರೂ. 265/– | ಅಂಕಪಟ್ಟಿ ಶುಲ್ಕ (ಪ್ರತಿ ಸೆಮಿಸ್ಟರ್‌ಗೆ) | ರೂ. 265/– |
| 5 | ಕಿರುಪರೀಕ್ಷೆಯ ಪುಸ್ತಕ ಶುಲ್ಕ ಎಲ್ಲಾ ಸ್ನಾತಕ ಪದವಿಗಳಿಗೆ (ಪ್ರತಿ ವಿದ್ಯಾರ್ಥಿಗೆ) | | | I & II Sem: ರೂ. 85/–<br>III & IV Sem: ರೂ. 90/–<br>V & VI Sem: ರೂ. 95/– |

ಪು.ತಿ.ನೋ

| ಬಿ.ಎಸ್ಸಿ (ಆನರ್ಸ್) ಪದವಿಯ ಪರೀಕ್ಷಾ ಶುಲ್ಕದ ವಿವರ (ಸಹ್ಯಾದ್ರಿ ವಿಜ್ಞಾನ ಕಾಲೇಜು, ಶಿವಮೊಗ್ಗ) | | | | |
|---|---|---|---|---|
| | ವಿವರ | ಪರೀಕ್ಷಾ ಶುಲ್ಕ | ಅಂಕಪಟ್ಟಿ ಶುಲ್ಕ | ಒಟ್ಟು ಶುಲ್ಕ |
| 1 | ಪ್ರತಿ ಸೆಮಿಸ್ಟರ್ ಪೂರ್ಣ ಪರೀಕ್ಷೆಗೆ | ರೂ. 1520/- | ರೂ. 265/- | ರೂ. 1785/- |
| 2 | ಸೆಮಿಸ್ಟರ್‌ನ ಪ್ರತಿ ಥಿಯರಿ ಪತ್ರಿಕೆಗೆ | ರೂ. 465/- | ರೂ. 265/- | ರೂ. 730/- |
| 3 | ಸೆಮಿಸ್ಟರ್‌ನ ಒಂದು ಪ್ರಾಯೋಗಿಕ ಪರೀಕ್ಷೆಗೆ | ರೂ. 465/- | ರೂ. 265/- | ರೂ. 730/- |

## ವಿದ್ಯಾರ್ಥಿಗಳಿಗೆ ಸೂಚನೆ:

1. ವಿದ್ಯಾರ್ಥಿಗಳು online ಮುಖಾಂತರ ಅರ್ಜಿ ಸಲ್ಲಿಸಲು **www.kuvempu.ac.in** ನಲ್ಲಿ studentportal ಗೆ login ಆಗಿ ಪರೀಕ್ಷೆ ತೆಗೆದುಕೊಳ್ಳುವ ಸೆಮಿಸ್ಟರ್‌ವಾರು/ವಿಷಯವಾರು ಗುರುತು ಮಾಡಿ ಪರೀಕ್ಷಾ ಅರ್ಜಿಯನ್ನು ಸಲ್ಲಿಸಬೇಕು.
2. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ಯಾವುದೇ ATM (Debit) Card / Credit Card / Net Banking / Paytm wallet ಮೂಲಕ ನೇರವಾಗಿ ವಿದ್ಯಾರ್ಥಿಯು ವೈಯಕ್ತಿಕ ಅಥವಾ ಪೋಷಕರ ಬ್ಯಾಂಕ್ ಖಾತೆಯಿಂದ ಹಣಪಾವತಿಸಬಹುದಾಗಿದೆ ಹಣ ಪಾವತಿಸಿ ಸಂಬಂಧಿಸಿದ ಚಲನ್ ಪ್ರತಿ ಮತ್ತು ದಾಖಲಾತಿಗಳನ್ನು ಕಾಲೇಜಿಗೆ ಸಲ್ಲಿಸಬೇಕು. ನಿಗದಿಪಡಿಸಿದ ದಿನಾಂಕದ ನಂತರ ಸಲ್ಲಿಸಿದಲ್ಲಿ ಅಂತಹ ಅರ್ಜಿಗಳನ್ನು ಮಾನ್ಯ ಮಾಡಲಾಗುವುದಿಲ್ಲ.

**ವಿಶೇಷ ಸೂಚನೆ:ವಿದ್ಯಾರ್ಥಿಗಳು Internet Browsing centreನ ಮಾಲೀಕರ ಬ್ಯಾಂಕ್‌ಖಾತೆಯ ಮೂಲಕ ವಿಶ್ವವಿದ್ಯಾಲಯಕ್ಕೆ ಹಣ ಪಾವತಿಸಿದಲ್ಲಿ ಉಂಟಾಗುವ ತಾಂತ್ರಿಕ ತೊಂದರೆಗಳಿಗೆ ವಿದ್ಯಾರ್ಥಿಗಳೇ ಜವಾಬ್ದಾರರು ಅಂತರ್‌ಜಾಲದಲ್ಲಿ ಪಾವತಿಸುವಾಗ ಬ್ಯಾಂಕ್‌ನ ಅಥವಾ ಇತರೆ ತಾಂತ್ರಿಕ ಕಾರಣಗಳಿಂದ ಪಾವತಿಯಾದ ಮೊತ್ತಕ್ಕೆ ಖಚಿತತೆ ಸೂಚನೆ ಬರುವುದು ಕನಿಷ್ಠ 15 ನಿಮಿಷ ಆಗಬಹುದಾಗಿದೆ. ಈ ಹಿನ್ನೆಲೆಯಲ್ಲಿ ತಕ್ಷಣವೇ ಮತ್ತೊಮ್ಮೆ ಪಾವತಿಸದೇ ಇರಲು ಸೂಚಿಸಿದೆ. ಒಂದೊಮ್ಮೆ ಒಂದಕ್ಕಿಂತ ಹೆಚ್ಚು ಬಾರಿ ಪಾವತಿಸಿದಲ್ಲಿ 'ಪರೀಕ್ಷಾ ಮಿತ್ರ' Linkನಲ್ಲಿ ಲಭ್ಯವಿರುವ Refund Formನ್ನು ಪಡೆದು ಭರ್ತಿ ಮಾಡಿ ಸೂಕ್ತ ದಾಖಲೆಗಳೊಂದಿಗೆ ಕುಲಸಚಿವರು(ಪ) ಇವರಿಗೆ ಸಲ್ಲಿಸುವುದು. ಮರುಪಾವತಿಗೆ ಕನಿಷ್ಠ ಒಂದು ತಿಂಗಳ ಕಾಲಾವಧಿ ಬೇಕಾಗುತ್ತದೆ.**

ಅ. S.S.P ಪೋರ್ಟಲ್ ಮುಖಾಂತರ ಸಮಾಜ ಕಲ್ಯಾಣ ಇಲಾಖೆಯಿಂದ ನೇರವಾಗಿ ಆಯಾ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ವಿದ್ಯಾರ್ಥಿ ವೇತನ ಜಮಾ ಮಾಡಲಾಗುತ್ತಿರುವುದರಿಂದ, ಪರಿಶಿಷ್ಟ ಜಾತಿ:ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು.

3. ಪ್ರವರ್ಗ-1ಕ್ಕೆ ರೂ. 2.5 ಲಕ್ಷ ಅಥವಾ ಇದಕ್ಕಿಂತ ಕಡಿಮೆ ಕುಟುಂಬದ ವಾರ್ಷಿಕ ಆದಾಯವನ್ನು ಹೊಂದಿರುವ 2ಎ, 2ಬಿ, 3ಎ, 3ಬಿ ಹಾಗೂ Freshers ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು. ಆದರೆ, ವಿದ್ಯಾರ್ಥಿಗಳ ಅರ್ಹತೆ ಮತ್ತು ಮೆರಿಟ್ ಆಧರಿಸಿ ಸರ್ಕಾರದ ಅನುದಾನದ ಲಭ್ಯತೆಗೆ ಒಳಪಟ್ಟು ಶುಲ್ಕ ಮರುಭರಿಕೆ ಮೊತ್ತವನ್ನು ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ಇಲಾಖೆಯಿಂದ ನೇರವಾಗಿ ಆಯಾ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಎನ್.ಇ.ಎಫ್.ಟಿ ವ್ಯವಸ್ಥೆ ಮೂಲಕ ಜಮಾ ಮಾಡಲಾಗುವುದೆಂದು ಸರ್ಕಾರದ ಆದೇಶ ಸಂಖ್ಯೆ: ಸ.ಕ.ಇ/201/ಬಿ.ಎಂ.ಎಸ್/2011 ಬೆಂಗಳೂರು ದಿನಾಂಕ:23-06-2012ರಲ್ಲಿ ತಿಳಿಸಿರುತ್ತಾರೆ.

4. **ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ಮರುಮೌಲ್ಯಮಾಪನದ ಫಲಿತಾಂಶ ಪ್ರಕಟಗೊಳ್ಳದೇ ಇದ್ದ ಸಂದರ್ಭ/ತಾಂತ್ರಿಕ ತೊಂದರೆ ಇದ್ದಾಗೂ ಕೂಡಾ ನಿಗದಿತ ಸಮಯದಲ್ಲಿ ಪರೀಕ್ಷಾ ಶುಲ್ಕ ಪಾವತಿಸಬೇಕು. ಮರುಮೌಲ್ಯಮಾಪನ/ಮರು ಸಂಕಲನಕ್ಕೆ ಅರ್ಜಿ ಸಲ್ಲಿಸುವ ಮುನ್ನ ವಿಶ್ವವಿದ್ಯಾಲಯದ ನಿಯಮಾವಳಿಯನ್ನು ಕೂಲಂಕಶವಾಗಿ ಮನದಟ್ಟು ಮಾಡಿಕೊಳ್ಳಲು ಸೂಚಿಸಿದೆ.**

# ಪ್ರಾಚಾರ್ಯರಿಗೆ ಸೂಚನೆಗಳು

1. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಿ ಸಲ್ಲಿಸಿದ ಚಲನ್‌ನ್ನು ಪರಿಶೀಲಿಸಿ ಕೊನೆ ದಿನಾಂಕದಿಂದ ಎರಡು ದಿನದೊಳಗಾಗಿ ಪ್ರಾಂಶುಪಾಲರ ಮೇಲುಸಹಿಯೊಂದಿಗೆ ಚಲನ್ ಪ್ರತಿ ಹಾಗೂ ಇತರೆ ದಾಖಲೆಗಳೊಂದಿಗೆ ವಿಶ್ವವಿದ್ಯಾಲಯಕ್ಕೆ ಸಲ್ಲಿಸಬೇಕು. ನಂತರ ಕಳುಹಿಸುವ ಅರ್ಜಿಗಳನ್ನು ಮಾನ್ಯಮಾಡುವುದಿಲ್ಲ.

2. **ಕುಲಸಚಿವ(ಆಡಳಿತ)/ಶೈಕ್ಷಣಿಕ ವಿಭಾಗದಿಂದ ಪ್ರವೇಶಾತಿ ಅನುಮೋದನೆಯಾಗದೇ ಹಾಗೂ ಕಡಿಮೆ ಹಾಜರಾತಿ ಇರುವ ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಜಿಗಳನ್ನು ಸಲ್ಲಿಸಲು ಅನರ್ಹರಾಗಿರುತ್ತಾರೆ.** ಪ್ರವೇಶಾವಕಾಶವು ಅಮಾನ್ಯವಾಗಿರುವ ಅಥವಾ ವಿಶ್ವವಿದ್ಯಾಲಯದಿಂದ ಪ್ರವೇಶವು ಅನುಮೋದಿತವಾಗಿಲ್ಲದ ಅಥವಾ ನಿರ್ದಿಷ್ಟ ಪಡಿಸಲಾದ ವಿದ್ಯಾರ್ಥಿಗಳ ಸಂಖ್ಯೆಗಿಂತ ಹೆಚ್ಚುವರಿಯಾಗಿ ಕಾಲೇಜಿಗೆ ಅಥವಾ ವ್ಯಾಸಂಗಕ್ಕೆ ಪ್ರವೇಶ ಪಡೆದಿರುವ ಯಾವೊಬ್ಬ ವಿದ್ಯಾರ್ಥಿಯೂ, ಕಾಲೇಜು ಅಥವಾ ವಿಶ್ವವಿದ್ಯಾಲಯವು ನಡೆಸುವ ಪರೀಕ್ಷೆಗೆ ಹಾಜರಾಗಲು ಅರ್ಹರಾಗಿರುವುದಿಲ್ಲ. ಅಲ್ಲದೆ ಆಯಾ ಕೋರ್ಸಿನ ನಿಯಮದ ಪ್ರಕಾರ ಪರೀಕ್ಷೆ ತೆಗೆದುಕೊಳ್ಳಲು ಅರ್ಹರಲ್ಲದ ವಿದ್ಯಾರ್ಥಿಗಳು ಅರ್ಜಿಗಳನ್ನು ಸಲ್ಲಿಸುವಂತಿಲ್ಲ.

3. ಹಾಜರಾತಿ ಕೊರತೆ ಇರುವಂತಹ ಹಾಗೂ ಪ್ರವೇಶಾನುಮೋದನೆಯಾಗದೆ ವಿದ್ಯಾರ್ಥಿಗಳ ಪಟ್ಟಿಯನ್ನು ಪರೀಕ್ಷೆಗಳು ಆರಂಭವಾಗುವ 15ದಿನ ಮುಂಚಿತವಾಗಿ ವಿಶ್ವವಿದ್ಯಾಲಯಕ್ಕೆ ತಪ್ಪದೇ ಸಲ್ಲಿಸುವುದು. ಒಂದು ವೇಳೆ ಹಾಜರಾತಿ ಕೊರತೆ ಹಾಗೂ ಪ್ರವೇಶಾನುಮೋದನೆಯಾಗದೇ ಇರುವ ವಿದ್ಯಾರ್ಥಿಗಳು ಮುಂದಿನ ಸೆಮಿಸ್ಟರ್‌ಗೆ ಅರ್ಹತೆಯಿಲ್ಲದೆ ಪರೀಕ್ಷಾ ಅರ್ಜಿ ಸಲ್ಲಿಸಿದ್ದಲ್ಲಿ/ಪರೀಕ್ಷೆ ತೆಗೆದುಕೊಂಡಲ್ಲಿ ಮುಂದಿನ ಎಲ್ಲಾ ತರಹದ ತೊಂದರೆಗಳಿಗೆ ಕಾಲೇಜಿನ ಪ್ರಾಂಶುಪಾಲರೆ ನೇರ ಜವಾಬ್ದಾರಾಗಿರುತ್ತಾರೆ.

   **ಪ್ರಾಯೋಗಿಕ ಪರೀಕ್ಷೆಗೆ ಅಗತ್ಯವಾದ ಉತ್ತರ ಪತ್ರಿಕೆ / ಲೇಖನ ಸಾಮಾಗ್ರಿ ಹಾಗೂ ಮುದ್ರಿತ ನಮೂನೆಗಳಿಗೆ ಬೇಡಿಕೆಪಟ್ಟಿಗಳನ್ನು ದಿನಾಂಕ: 30–10–2024ರೊಳಗಾಗಿ ತಲುಪಿಸಲು ಸೂಚಿಸಿದೆ.**

4. ಸೈದ್ಧಾಂತಿಕ ಪರೀಕ್ಷೆ ನಡೆಸಲು ಬೇಕಾದ ಉತ್ತರ ಪತ್ರಿಕೆ ಮುದ್ರಿತ ನಮೂನೆಗಳು ಹಾಗೂ ಲೇಖನ ಸಾಮಾಗ್ರಿಗಳ ಬೇಡಿಕೆ ಪಟ್ಟಿಗಳನ್ನು **ದಿನಾಂಕ: 05–11–2024ರೊಳಗಾಗಿ, ಶ್ರೀ ರವಿ ಕೆ. ಆರ್.** ಪರೀಕ್ಷಾಂಗ ವಿಭಾಗ ಇವರಿಗೆ ತಲುಪಿಸಲು ಸೂಚಿಸಿದೆ. (ಹೆಚ್ಚಿನ ಮಾಹಿತಿಗೆ 9538020448 ಸಂಪರ್ಕಿಸಬಹುದು.)

5. **ಪ್ರಶ್ನೆ ಪತ್ರಿಕೆಗಳ ಬೇಡಿಕೆ ಪಟ್ಟಿಯನ್ನುOnline-oasis.logisys.org/kusನಲ್ಲಿ ದಿನಾಂಕ: 21-10–2024 ರಂದು ಪ್ರಕಟಿಸಲಾಗುವುದು, ಸದರಿ ಪ್ರಶ್ನೆಪತ್ರಿಕೆ ಬೇಡಿಕೆ ಪಟ್ಟಿಯನ್ನು ಪರಿಶೀಲಿಸಿ, ದಿನಾಂಕ:30–10–2024 ರೊಳಗೆ ಸರಿ ಇದೆ/ಇಲ್ಲ ಎಂದು ಶ್ರೀ ಸಿದ್ಧಲಿಂಗ ಜಿ ಪಾಟೀಲ್, ಸಹಾಯಕ ಕುಲಸಚಿವರು (ಪರೀಕ್ಷಾಂಗ)(ಮೊಬೈಲ್ ಸಂಖ್ಯೆ: 9481877505) ಇವರಿಗೆ ತಿಳಿಸಲು ಸೂಚಿಸಿದೆ.**

6. ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ವಿದ್ಯಾರ್ಥಿಗಳ ಗಮನಕ್ಕೆ ತಂದು, ವಿದ್ಯಾರ್ಥಿಗಳ ಸಹಿ ಪಡೆದು, ನಿಗದಿತ ಸಮಯದೊಳಗೆ ಆನ್‌ಲೈನ್ ಮೂಲಕ ನಮೂದಿಸಿ ನಂತರ Freeze ಮಾಡಬೇಕು. ನಂತರದ ಮನವಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ. **(ಹೆಚ್ಚಿನ ಮಾಹಿತಿಗೆ 7022255745 ಸಂಪರ್ಕಿಸಬಹುದು.)**

7. ವಿಶ್ವವಿದ್ಯಾಲಯವು ಆಂತರಿಕ ಕಿರುಪರೀಕ್ಷೆಯ ಉತ್ತರ ಪತ್ರಿಕೆ (ಬ್ಲೂ ಬುಕ್)ಗಳನ್ನು ಹಿಂಪಡೆಯುವುದರಿಂದ ಸೈದ್ಧಾಂತಿಕ ಪರೀಕ್ಷೆ ಪ್ರಾರಂಭಕ್ಕೆ ಮುಂಚೆ ಆಂತರಿಕ ಅಂಕಗಳಿಗೆ ಸಂಬಂಧಿಸಿದಂತೆ ಯಾವುದೇ ತೊಂದರೆಗಳಿದ್ದಲ್ಲಿ ಅದನ್ನು ಬಗೆಹರಿಸಿಕೊಳ್ಳಬೇಕು. ತಂದನಂತರ ಬರುವಂತಹ ಆಂತರಿಕ ಅಂಕಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ. **(ಹೆಚ್ಚಿನ ಮಾಹಿತಿಗೆ 7022255745 ಸಂಪರ್ಕಿಸಬಹುದು.)**

8. ಆಂತರಿಕ ಪರೀಕ್ಷೆಗಳ ಉತ್ತರ ಪತ್ರಿಕೆಗಳನ್ನು ತಮ್ಮ ಕಾಲೇಜಿನಲ್ಲಿಯೇ ಆರು ತಿಂಗಳಕಾಲ ಸಂರಕ್ಷಿಸಿಟ್ಟುಕೊಂಡು ನಂತರ ವಿಶ್ವವಿದ್ಯಾಲಯಕ್ಕೆ ಕಳುಹಿಸಿಕೊಡುವುದು.

*ಪು.ತಿ.ನೋ*

9. ಯಾವುದೇ ವಿದ್ಯಾರ್ಥಿಯ ಆಂತರಿಕ ಅಂಕಗಳನ್ನು ಆನ್‌ಲೈನ್‌ನಲ್ಲಿ ನಮೂದಿಸದೇ ಬಿಟ್ಟುಹೋದಲ್ಲಿ ಯಾವುದೇ ಕಾರಣಕ್ಕೂ ಹಾರ್ಡ್‌ಕಾಪಿಯನ್ನು ನಂತರ ಕಾಲೇಜಿನಿಂದ ಕಳುಹಿಸಿಕೊಟ್ಟಲ್ಲಿ ಅದನ್ನು ಪರಿಗಣಿಸಲಾಗುವುದಿಲ್ಲ ಅಂತಹ ಮನವಿಗಳನ್ನು ತಿರಸ್ಕರಿಸಲಾಗುವುದು. **(ಹೆಚ್ಚಿನ ಮಾಹಿತಿಗೆ 8904712601 ಸಂಪರ್ಕಿಸಬಹುದು.)**

***:ವಿಶೇಷ ಸೂಚನೆ:***

**ಕೇಂದ್ರ ಸರ್ಕಾರದ ಮಾನವ ಸಂಪನ್ಮೂಲ ಇಲಾಖೆ ಹಾಗೂ ಯು.ಜಿ.ಸಿ.ಯ ಆದೇಶದಂತೆ ವಿದ್ಯಾರ್ಥಿಗಳ ಎಲ್ಲಾ ಶೈಕ್ಷಣಿಕ ದಾಖಲೆಗಳನ್ನು National Academic Depository (NAD)ಗೆ ದಾಖಲಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಎಲ್ಲಾ ವಿದ್ಯಾರ್ಥಿಗಳು NADಗೆ ನೋಂದಣಿ ಮಾಡಿಕೊಳ್ಳುವುದು ಕಡ್ಡಾಯವಾಗಿರುತ್ತದೆ. ನೋಂದಣಿ ಮಾಡಿಕೊಂಡ ವಿದ್ಯಾರ್ಥಿಗಳ ಶೈಕ್ಷಣಿಕ ದಾಖಲೆಗಳನ್ನು ಭವಿಷ್ಯದಲ್ಲಿ ಯಾವ ಸಮಯದಲ್ಲಿಯೂ ಕೂಡ NAD ವೆಬ್‌ಸೈಟ್‌ನಲ್ಲಿ ಸ್ವತಃ ಪಡೆಯಲು ಹಾಗೂ ಪರಿಶೀಲನೆಗೆ ಅವಕಾಶ ನೀಡಲಾಗುವುದು. ಪರೀಕ್ಷಾ ಶುಲ್ಕವನ್ನು ಪಾವತಿಸುವಾಗ ಅಥವಾ ಪರೀಕ್ಷಾ ಅರ್ಜಿಯಲ್ಲಿ ನಮೂದಾದ ಮೊಬೈಲ್ ಸಂಖ್ಯೆ ಹಾಗೂ ಈಮೇಲ್‌ಗಳಿಗೆ NAD ನೋಂದಣಿ ಪ್ರಕ್ರಿಯೆಗೆ ಆಗತ್ಯವಾದ Linkನ್ನು ಕಳುಹಿಸಲಾಗುತ್ತದೆ. NAD ನೋಂದಣಿ ಸಂಖ್ಯೆ ಪಡೆದಲ್ಲಿ ಮಾತ್ರ ಪ್ರವೇಶ ಪತ್ರವನ್ನು ನೀಡಲಾಗುವುದು.**

ಕುಲಸಚಿವರು(ಪರೀಕ್ಷಾಂಗ)
ಕುಲಸಚಿವ (ಪರೀಕ್ಷಾಂಗ)
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನ ಸಹ್ಯಾದ್ರಿ
ಶಂಕರಘಟ್ಟ-577451, ಶಿವಮೊಗ್ಗ ಜಿಲ್ಲೆ

ಗೆ,

**ಕುವೆಂಪು ವಿಶ್ವವಿದ್ಯಾನಿಲಯದ ಶಿವಮೊಗ್ಗ / ಚಿಕ್ಕಮಗಳೂರು ಜಿಲ್ಲೆಯ ವ್ಯಾಪ್ತಿಗೊಳಪಡುವ ಎಲ್ಲಾ ಸ್ನಾತಕ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.**

**ಪ್ರತಿಗಳು:**

1. ಆಪ್ತಶಾಖೆ, ಮಾನ್ಯಕುಲಪತಿ, ಕುಲಸಚಿವ(ಆಡಳಿತ), ಕುಲಸಚಿವ (ಪರೀಕ್ಷಾಂಗ) ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
2. ನಿರ್ದೇಶಕರು, ಪಿ.ಎಂ.ಇ ಮಂಡಳಿ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
3. ಸರ್ಕಾರಿ ಲೆಕ್ಕಪರಿಶೋಧಕರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
4. ಉಪಕುಲಸಚಿವರು: ಸಹಾಯಕ ಕುಲಸಚಿವರು, ಪರೀಕ್ಷಾಂಗ ವಿಭಾಗ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
5. ಶಾಖಾಧಿಕಾರಿಗಳು, ಪರೀಕ್ಷಾ ವಿಭಾಗ ಹಾಗೂ ಕಂಪ್ಯೂಟರ್ ವಿಭಾಗ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
6. ಗ್ರಂಥಪಾಲಕರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ – ಸದರಿ ಅಧಿಸೂಚನೆಯನ್ನು ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ಕೋರಲಾಗಿದೆ.
7. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
8. ನಿರ್ದೇಶಕರು, UCCF ಕಛೇರಿ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
9. ಎಲ್ಲಾ ಸ್ನಾತಕ ವಿಷಯ ನಿರ್ವಾಹಕರು, ಪರೀಕ್ಷಾ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
10. ಕಛೇರಿ ಪ್ರತಿ.